ಕರ್ನಾಟಕ ವಿಧಾನಸಭೆ

ಹದಿನಾಲ್ಕನೇ ವಿಧಾನಸಭೆ
(ಎಂಟನೇ ಅಧಿವೇಶನ)

ಕಾರ್ಯಕಲಾಪಗಳ ಪಟ್ಟಿ

ಬುಧವಾರ, ದಿನಾಂಕ 22ನೇ ಜುಲೈ, 2015
(ಸಮಯ: ಬೆಳಗ್ಗೆ 11.00 ಗಂಟೆಗೆ)

-----

1. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು	:	ಹದಿನೆಂಟನೇ ಪಟ್ಟಿ
ಆ) ದಿನಾಂಕ 08.07.2015ರ ಎಂಟನೇ ಪಟ್ಟಿಯಿಂದ ತಡೆಹಿಡಿಯಲಾದ ಶ್ರೀ ಬಿ.ಎನ್. ವಿಜಯ ಕುಮಾರ್ ಅವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 109(2113)	:	ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು
ಇ) ದಿನಾಂಕ 21.07.2015ರ ಹದಿನೇಳನೇ ಪಟ್ಟಿಯಿಂದ ವರ್ಗಾವಣೆಗೊಂಡ ಶ್ರೀ ಹೆಚ್.ಸಿ. ಬಾಲಕೃಷ್ಣ ಅವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 249(2284)	:	ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಸಚಿವರು
ಈ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು	:	ಹದಿನೆಂಟನೇ ಪಟ್ಟಿ

2. ವರದಿಯನ್ನೊಪ್ಪಿಸುವುದು

ಶ್ರೀಮತಿ ಶಕುಂತಲಾ ಟಿ. ಶೆಟ್ಟಿ, (ಅಧ್ಯಕ್ಷರು, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸಮಿತಿ) ಅವರು:- 2014-15ನೇ ಸಾಲಿನ ವಿಧಾನಮಂಡಲದ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸಮಿತಿಯ ಮೂವತ್ತನೇ ವರದಿಯನ್ನೊಪ್ಪಿಸುವುದು.

ಮು.ತಿ.ನೋ.,.

೩. ವಿತ್ತೀಯ ಕಾರ್ಯಕಲಾಪಗಳು

ಅ) 2015-16ನೇ ಸಾಲಿನ ಈ ಕೆಳಕಂಡ ಅನುದಾನ ಬೇಡಿಕೆಯ ಮೇಲೆ ನಡೆದ ಚರ್ಚೆಗೆ ಸರ್ಕಾರದ ಮುಂದುವರೆದ ಉತ್ತರ ಮತ್ತು ಮತಕ್ಕೆ ಹಾಕುವುದು:

ಬೇಡಿಕೆ ಸಂಖ್ಯೆ	**ಬೇಡಿಕೆಯ ಹೆಸರು**
21	ಜಲಸಂಪನ್ಮೂಲ

ಆ) **ಶ್ರೀ ಸಿದ್ಧರಾಮಯ್ಯ (ಮುಖ್ಯಮಂತ್ರಿಗಳು) ಅವರು** 2015-16ನೇ ಸಾಲಿನ ಪೂರಕ ಅಂದಾಜುಗಳನ್ನು (ಮೊದಲನೆ ಕಂತು) ಮಂಡಿಸುವುದು.

ಇ) 2015-16ನೇ ಸಾಲಿನ ಕೆಳಕಂಡ ಅನುದಾನ ಬೇಡಿಕೆಗಳ ಮೇಲೆ ಚರ್ಚೆ, ಸರ್ಕಾರದ ಉತ್ತರ ಹಾಗೂ ಮತಕ್ಕೆ ಹಾಕುವುದು.

ಬೇಡಿಕೆ ಸಂಖ್ಯೆ	**ಬೇಡಿಕೆಗಳ ಹೆಸರು**
03	ಆರ್ಥಿಕ
04	ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ
18	ವಾಣಿಜ್ಯ ಮತ್ತು ಕೈಗಾರಿಕೆ
24	ಇಂಧನ
12	ವಾರ್ತಾ, ಪ್ರವಾಸೋದ್ಯಮ ಮತ್ತು ಯುವಜನಸೇವೆಗಳು
17	ಶಿಕ್ಷಣ
02	ಪಶುಸಂಗೋಪನೆ ಮತ್ತು ಮೀನುಗಾರಿಕೆ
27	ಕಾನೂನು
28	ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ
08	ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ
14	ಕಂದಾಯ
05	ಒಳಾಡಳಿತ ಮತ್ತು ಸಾರಿಗೆ
16	ವಸತಿ
19	ನಗರಾಭಿವೃದ್ಧಿ
22	ಆರೋಗ್ಯ ಮತ್ತು ಕುಟುಂಬ ಕಲ್ಯಾಣ
10	ಸಮಾಜ ಕಲ್ಯಾಣ
15	ಮಾಹಿತಿ ತಂತ್ರಜ್ಞಾನ
26	ಯೋಜನೆ, ಸಾಂಖ್ಯಿಕ, ವಿಜ್ಞಾನ ಮತ್ತು ತಂತ್ರಜ್ಞಾನ
13	ಆಹಾರ ಮತ್ತು ನಾಗರೀಕ ಸರಬರಾಜು

06	ಮೂಲಭೂತ ಸೌಕರ್ಯ ಅಭಿವೃದ್ಧಿ
11	ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ
25	ಕನ್ನಡ ಮತ್ತು ಸಂಸ್ಕೃತಿ
23	ಕಾರ್ಮಿಕ

ಈ) 2015-16ನೇ ಸಾಲಿನ ಪೂರಕ ಅಂದಾಜುಗಳ (ಮೊದಲನೆ ಕಂತು) ಮೇಲೆ ಚರ್ಚೆ. ಸರ್ಕಾರದ ಉತ್ತರ ಹಾಗೂ ಮತಕ್ಕೆ ಹಾಕುವುದು.

4. ನಿಯಮ 69ರ ಮೇರೆಗೆ ಸಾರ್ವಜನಿಕ ಮಹತ್ವದ ಜರೂರು ವಿಷಯದ ಬಗ್ಗೆ ಅಲ್ಪ ಕಾಲಾವಧಿ ಚರ್ಚೆ

ಶ್ರೀಯುತರುಗಳಾದ ಜಗದೀಶ್‌ಶೆಟ್ಟರ್, ಬಸವರಾಜ್ ಬೊಮ್ಮಾಯಿ, ವಿಶ್ವೇಶ್ವರ ಹೆಗಡೆ ಕಾಗೇರಿ, ಎಸ್.ಸುರೇಶ್‌ಕುಮಾರ್, ಸಿ.ಟಿ.ರವಿ, ಬಿ.ಎನ್.ವಿಜಯಕುಮಾರ್ ಹಾಗೂ ಇತರರು ಬಿ.ಬಿ.ಎಂ.ಪಿ. ವ್ಯಾಪ್ತಿಯಲ್ಲಿ ಘನತ್ಯಾಜ್ಯ ನಿರ್ವಹಣೆಗೆ ತಯಾರಿಸಲಾಗಿರುವ ನೂತನ ಟೆಂಡರ್ ಅಂದಾಜು ಪಟ್ಟಿಯಲ್ಲಿನ ಅಕ್ರಮದ ಬಗ್ಗೆ ಪ್ರಸ್ತಾಪಿಸಲು ನೀಡಿರುವ ಸೂಚನೆಯ ಮೇಲೆ ಚರ್ಚೆ.

5. ಗಮನ ಸೆಳೆಯುವ ಸೂಚನೆಗಳು

1. ಶ್ರೀ ಜಿ.ಹೆಚ್.ಶ್ರೀನಿವಾಸ್ ಅವರು ತರೀಕೆರೆ ಪಟ್ಟಣ ಹಾಗೂ ಶಿವನಿಯಲ್ಲಿ ಪ್ರಾರಂಭವಾಗಿರುವ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಗಳ ಕಟ್ಟಡ ಕಾಮಗಾರಿಯನ್ನು ಪ್ರಾರಂಭಿಸಲು ವಿಳಂಬವಾಗುತ್ತಿರುವ ಬಗ್ಗೆ ಮಾನ್ಯ ಕಾರ್ಮಿಕ ರಾಜ್ಯ ಸಚಿವರ ಗಮನ ಸೆಳೆಯುವುದು.

2. ಶ್ರೀ ಬಸವರಾಜ ನೀಲಪ್ಪ ಶಿವಣ್ಣನವರ್ ಅವರು ಹಾವೇರಿ ಜಿಲ್ಲೆ ಬ್ಯಾಡಗಿ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಜಿಂಕೆಗಳ ಹಾವಳಿಯನ್ನು ತಡೆಯಲು ಅರಣ್ಯ ಪ್ರದೇಶಗಳಿಗೆ ಬ್ಯಾಟರಿ ಚಾಲಿತ ತಂತಿ ಬೇಲಿಯನ್ನು ಹಾಕಿಸುವ ಬಗ್ಗೆ ಮಾನ್ಯ ಅರಣ್ಯ ಸಚಿವರ ಗಮನ ಸೆಳೆಯುವುದು.

3. ಶ್ರೀ ಎಂ.ಸತೀಶ್‌ರೆಡ್ಡಿ ಮತ್ತು ಶ್ರೀ ಎಸ್.ಆರ್. ವಿಶ್ವನಾಥ್ ಅವರುಗಳು ಬೆಂಗಳೂರು ಮಹಾನಗರ ವ್ಯಾಪ್ತಿಯ ಅಗರ, ಬೆಳ್ಳಂದೂರು ಭಾಗದಲ್ಲಿನ ಸರ್ವೆ ನಂ. 9, 10,13, 16 ಗಳಲ್ಲಿ 100 ಎಕರೆಗಳಷ್ಟು ಭೂಮಿಯನ್ನು ನೀರು ಸಂಸ್ಕರಣಾ ಘಟಕ ಸ್ಥಾಪನೆಗಾಗಿ ಮೀಸಲಿಟ್ಟು ಯೋಜನೆಯನ್ನು ಅನುಷ್ಠಾನಗೊಳಿಸುವ ಬಗ್ಗೆ ಮಾನ್ಯ ಮುಖ್ಯಮಂತ್ರಿಯವರ ಗಮನ ಸೆಳೆಯುವುದು.

ಪು.ತಿ.ನೋ.,

4. ಶ್ರೀ ಹೆಚ್.ಎಸ್. ಶಿವಶಂಕರ್ ಅವರು ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಉಪನ್ಯಾಸಕರುಗಳಿಗೆ ಪ್ರಾಂಶುಪಾಲರಾಗಿ ಬಡ್ತಿ ನೀಡುವ ಬಗ್ಗೆ ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರ ಗಮನ ಸೆಳೆಯುವುದು.

5. ಶ್ರೀ ವಿಶ್ವನಾಥ್ (ಆನಂದ) ಚಂದ್ರಶೇಖರ್ ಮಾಮನಿ ಅವರು ಬೆಳಗಾವಿ ಜಿಲ್ಲೆಯಲ್ಲಿ ಗ್ರಾಮ ವಿಕಾಸ ಯೋಜನೆ ಅನುಷ್ಠಾನಕ್ಕೆ ಬರದಿರುವ ಬಗ್ಗೆ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಸಚಿವರ ಗಮನ ಸೆಳೆಯುವುದು.

6. ಶ್ರೀ ಕೆ.ಆರ್. ರಮೇಶ್‌ಕುಮಾರ್ ಅವರು ಕಾಡುಗೋಡಿ ಸಾಮೂಹಿಕ ವ್ಯವಸಾಯ ಸಹಕಾರ ಸಂಘಕ್ಕೆ ನೀಡಿರುವ ಜಮೀನಿನ ದಾಖಲೆಗಳ ಬಗ್ಗೆ ನಿಯಮ ಮೀರಿ ಬೆಂಗಳೂರು ಉತ್ತರ ಉಪ-ವಿಭಾಗಾಧಿಕಾರಿಗಳು ಹೊರಡಿಸಿರುವ ಆದೇಶದಿಂದ ದಲಿತ ಕುಟುಂಬಗಳು ನಿರಾಶ್ರಿತರಾಗಿರುವ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

7. ಶ್ರೀ ಜೆ.ಆರ್.ಲೋಬೋ ಅವರು ದಕ್ಷಿಣ ಕನ್ನಡ ಜಿಲ್ಲೆಯ ಮಂಗಳೂರು ನಗರದ ನಂತೂರಿನಲ್ಲಿರುವ ಪದವಿ ಕಾಲೇಜಿನಲ್ಲಿ ಶೇಕಡಾ 50ಕ್ಕಿಂತ ಹೆಚ್ಚು ಕ್ರಿಶ್ಚಿಯನ್ ಸಮುದಾಯಕ್ಕೆ ಸೇರಿದ ವಿದ್ಯಾರ್ಥಿಗಳು ಇದ್ದರೂ ಸಂಸ್ಥೆಯನ್ನು ಅಲ್ಪಸಂಖ್ಯಾತರ ಸಂಸ್ಥೆಯೆಂದು ಘೋಷಿಸದಿರುವ ಬಗ್ಗೆ ಮಾನ್ಯ ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರ ಗಮನ ಸೆಳೆಯುವುದು.

8. ಶ್ರೀ ನಾರಾಯಣಗೌಡ ಅವರು ಕೆ.ಆರ್.ಪೇಟೆ ತಾಲ್ಲೂಕು ಕಛೇರಿಗೆ ಸಕಾಲದಲ್ಲಿ ಲೇಖನ ಸಾಮಗ್ರಿಗಳು ಸರಬರಾಜು ಆಗದೆ ರೈತರುಗಳಿಗೆ ಪಹಣಿ ವಿತರಿಸಲು ತೊಂದರೆಯಾಗುತ್ತಿರುವ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

9. ಶ್ರೀ ಹೆಚ್.ಡಿ.ರೇವಣ್ಣ ಅವರು 2015-16ನೇ ಸಾಲಿನಲ್ಲಿ ಹದಿನಾಲ್ಕನೇ ಹಣಕಾಸು ಯೋಜನೆಯಡಿಯಲ್ಲಿ ಜಿಲ್ಲಾ ಮತ್ತು ತಾಲ್ಲೂಕು ಪಂಚಾಯತಿಗಳಿಗೆ ಅನುದಾನ ಬಿಡುಗಡೆಯಾಗದಿರುವುದರಿಂದ ಅಭಿವೃದ್ಧಿ ಕಾರ್ಯಗಳು ಕುಂಠಿತಗೊಂಡಿರುವ ಬಗ್ಗೆ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಸಚಿವರ ಗಮನ ಸೆಳೆಯುವುದು.

10. ಶ್ರೀ ಪಿ.ಆರ್.ಸುಧಾಕರ್‌ಲಾಲ್ ಅವರು 2014-15ನೇ ಸಾಲಿನ ಆಯವ್ಯಯದಲ್ಲಿ ಘೋಷಣೆ ಮಾಡಿದಂತೆ ಪರಿಶಿಷ್ಟ ಜಾತಿ/ ಪರಿಶಿಷ್ಟ ಪಂಗಡದ ಉದ್ದಿಮೆದಾರರಿಗೆ ರಿಯಾಯಿತಿಯಲ್ಲಿ ಅವಧಿ ಸಾಲ ಹೆಚ್ಚಿಸುವ ಹಾಗೂ ಮರು ಪಾವತಿ ಅವಧಿಯನ್ನು ವಿಸ್ತರಿಸುವ ಬಗ್ಗೆ ಮಾನ್ಯ ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರ ಗಮನ ಸೆಳೆಯವುದು.

ಮು.ತಿ.ನೋ.,.

11. ಶ್ರೀ ವಿ. ಸುನೀಲ್‌ಕುಮಾರ್ ಅವರು ಕರಾವಳಿ ಅಭಿವೃದ್ಧಿ ಪ್ರಾಧಿಕಾರಕ್ಕೆ ಬಿಡುಗಡೆಯಾಗಿರುವ ಅನುದಾನವನ್ನು ವಿನಿಯೋಗಿಸಲು ಅನುಸರಿಸುವ ಮಾನದಂಡದ ಬಗ್ಗೆ ಮಾನ್ಯ ಯೋಜನೆ ಮತ್ತು ಸಾಂಖ್ಯಿಕ, ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರ ಗಮನ ಸೆಳೆಯುವುದು.

12. ಶ್ರೀ ಸಿ.ಟಿ.ರವಿ ಅವರು ಬೆಂಗಳೂರು ನಗರದ ಪೋಲೀಸ್ ವಸತಿ ಗೃಹಗಳಿಗೆ ನೀರು ವಿತರಣೆಗೆ ವಿಧಿಸುವ ಶುಲ್ಕದಲ್ಲಿರುವ ತಾರತಮ್ಯದಿಂದ ಉಂಟಾಗಿರುವ ಗೊಂದಲಗಳ ಬಗ್ಗೆ ಮಾನ್ಯ ಗೃಹ ಸಚಿವರ ಗಮನ ಸೆಳೆಯುವುದು.

13. ಡಾ|| ಕೆ.ಸುಧಾಕರ್ ಅವರು ಚಿಕ್ಕಬಳ್ಳಾಪುರ ಜಿಲ್ಲೆಗೆ 2013-14ನೇ ಸಾಲಿನಲ್ಲಿ ಮಂಜೂರಾಗಿರುವ ವೈದ್ಯಕೀಯ ಕಾಲೇಜಿನ ಕಟ್ಟಡ ನಿರ್ಮಾಣದ ಪ್ರಗತಿಯ ಬಗ್ಗೆ ಮಾನ್ಯ ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರ ಗಮನ ಸೆಳೆಯುವುದು.

14. ಶ್ರೀ ಕೆ.ಗೋಪಾಲ ಪೂಜಾರಿ ಅವರು ಉಡುಪಿ ಜಿಲ್ಲೆ ಬೈಂದೂರು ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ತ್ರಾಸಿ, ಮರವಂತೆ ಹಾಗೂ ಶಿರೂರು ಒತ್ತಿನೆಣೆ ಬೀಚ್ ಅಭಿವೃದ್ಧಿ ಕಾಮಗಾರಿಗಳನ್ನು ಅನುಷ್ಠಾನಗೊಳಿಸಲು ಕರ್ನಾಟಕ ರೂರಲ್ ಇನ್‌ಫ್ರಾಸ್ಟ್ರಕ್ಚರ್ ಡೆವಲಪ್‌ಮೆಂಟ್ ಲಿಮಿಟೆಡ್ ಅವರಿಗೆ ವಹಿಸಲಾಗಿರುವ ಕಾಮಗಾರಿಗಳನ್ನು ಪ್ರಾರಂಭಿಸದಿರುವ ಬಗ್ಗೆ ಮಾನ್ಯ ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರ ಗಮನ ಸೆಳೆಯುವುದು.

15. ಶ್ರೀ ಬಿ.ಆರ್.ಪಾಟೀಲ್ ಅವರು ಆಳಂದ ಪಟ್ಟಣದಲ್ಲಿ ರಾಜೀವ್‌ಗಾಂಧಿ ವಸತಿ ಗೃಹ ನಿರ್ಮಾಣ ನಿಗಮದಲ್ಲಿ ಮನೆ ಹಂಚಿಕೆ ಮಾಡಿರುವ ಬಗ್ಗೆ ತನಿಖೆ ನಡೆಸಲು ರಚಿಸಲಾಗಿದ್ದ ತಂಡ ಇದುವರೆಗೂ ವರದಿ ನೀಡದಿರುವ ಬಗ್ಗೆ ಮಾನ್ಯ ವಸತಿ ಸಚಿವರ ಗಮನ ಸೆಳೆಯುವುದು.

16. ಶ್ರೀ ಲಕ್ಷ್ಮಣ ಸಂಗಪ್ಪ ಸವದಿ ಅವರು ಚಿಕ್ಕೋಡಿ ಶೈಕ್ಷಣಿಕ ಜಿಲ್ಲೆಯ ಬಹುತೇಕ ಶಾಲಾ ಕಾಲೇಜುಗಳಲ್ಲಿ ಅಗತ್ಯ ಶಿಕ್ಷಕರಿಲ್ಲದೆ ವಿದ್ಯಾರ್ಥಿಗಳಿಗೆ ತೊಂದರೆ ಉಂಟಾಗುತ್ತಿರುವ ಬಗ್ಗೆ ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರ ಗಮನ ಸೆಳೆಯುವುದು.

17. ಶ್ರೀ ಎಸ್. ಚಿಕ್ಕಮಾದು ಅವರು ರಾಜ್ಯದಲ್ಲಿನ ಅರಣ್ಯ ಪ್ರದೇಶಗಳಲ್ಲಿ ಕಾಡ್ಗಿಚ್ಚು ಹರಡದಂತೆ ಮುಂಜಾಗ್ರತೆ ಕ್ರಮ ವಹಿಸುವ ಬಗ್ಗೆ ಮಾನ್ಯ ಅರಣ್ಯ ಸಚಿವರ ಗಮನ ಸೆಳೆಯುವುದು.

18. ಶ್ರೀ ಸಿ. ಪುಟ್ಟರಂಗಶೆಟ್ಟಿ ಅವರು ಚಾಮರಾಜನಗರ ಜಿಲ್ಲೆಯಲ್ಲಿ ಕುಡಿಯುವ ನೀರಿನ ಸಮಸ್ಯೆ ಉಂಟಾಗಿರುವ ಬಗ್ಗೆ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಸಚಿವರ ಗಮನ ಸೆಳೆಯುವುದು.

ಪು.ತಿ.ನೋ.,.

19. ಶ್ರೀ ಪಿಳ್ಳಮುನಿಶಾಮಪ್ಪ ಅವರು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ನಿಯಮ 198(ಡಿ) ರಂತೆ ಜಿಲ್ಲಾ ಪಂಚಾಯತಿ ವ್ಯಾಪ್ತಿಗೆ ಬರುವ ಅಭಿವೃದ್ಧಿ ಕಾಮಗಾರಿಗಳನ್ನು ಪೂರ್ಣಗೊಳಿಸದಿರುವ ಬಗ್ಗೆ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಸಚಿವರ ಗಮನ ಸೆಳೆಯುವುದು.

20. ಶ್ರೀ ಸಿದ್ದು ಬಿ. ನ್ಯಾಮಗೌಡ ಅವರು ಪ್ರತಿಭಾವಂತ ಕುಸ್ತಿ ಮತ್ತು ಸೈಕ್ಲಿಂಗ್ ಕ್ರೀಡಾಪಟುಗಳಿಗೆ ಸರ್ಕಾರಿ ನೌಕರಿಯಲ್ಲಿ ಮೀಸಲಾತಿ ಒದಗಿಸುವ ಬಗ್ಗೆ ಮಾನ್ಯ ಯುವ ಸಬಲೀಕರಣ ಮತ್ತು ಕ್ರೀಡಾ ಹಾಗೂ ಮೀನುಗಾರಿಕೆ ರಾಜ್ಯ ಸಚಿವರ ಗಮನ ಸೆಳೆಯುವುದು.

21. ಶ್ರೀ ಕೆ.ಎಂ.ಶಿವಲಿಂಗೇಗೌಡ ಅವರು ಮೊರಾರ್ಜಿ ದೇಸಾಯಿ ವಸತಿ ಶಾಲೆಗಳಿಗೆ ಪ್ರಾಂಶುಪಾಲರು/ಶಿಕ್ಷಕರ ನೇಮಕಾತಿಯಲ್ಲಿ ನೀಡುವ ಸೇವಾ ವಾರ್ಷಿಕ ಕೃಪಾಂಕದಲ್ಲಿರುವ ತಾರತಮ್ಯವನ್ನು ಸರಿಪಡಿಸುವ ಬಗ್ಗೆ ಮಾನ್ಯ ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರ ಗಮನ ಸೆಳೆಯುವುದು.

22. ಶ್ರೀ ಆರ್.ಜಗದೀಶ್‌ಕುಮಾರ್ ಅವರು ಸೂರ್ಯಮಿತ್ರ ಯೋಜನೆಯಲ್ಲಿ ಸೋಲಾರ್ ಬೆಳಕು ಉತ್ಪಾದನೆಗೆ ಬದಲಿ ಯೋಗ್ಯ ಭೂಮಿಯನ್ನು ಗುರುತಿಸಿ ಅನುಷ್ಠಾನಗೊಳಿಸುವ ಬಗ್ಗೆ ಮಾನ್ಯ ಇಂಧನ ಸಚಿವರ ಗಮನ ಸೆಳೆಯುವುದು.

23. ಶ್ರೀ ಎಲ್.ಎ. ರವಿ ಸುಬ್ರಮಣ್ಯ ಅವರು ಬೆಂಗಳೂರು ಒನ್ ಕೇಂದ್ರಗಳಲ್ಲಿ ಹಿರಿಯ ನಾಗರೀಕರಿಗೆ ಮೂಲಭೂತ ಸೌಕರ್ಯಗಳನ್ನು ಒದಗಿಸುವ ಹಾಗೂ ಸಿಬ್ಬಂದಿಗೆ ಕನಿಷ್ಠ ವೇತನ ನೀಡುವ ಬಗ್ಗೆ ಮಾನ್ಯ ಮುಖ್ಯಮಂತ್ರಿಯವರ ಗಮನ ಸೆಳೆಯುವುದು.

24. ಶ್ರೀಯುತರುಗಳಾದ ಹೆಚ್.ಎಸ್. ಪ್ರಕಾಶ್, ಹೆಚ್.ಕೆ.ಕುಮಾರಸ್ವಾಮಿ ಹಾಗೂ ಹೆಚ್.ಡಿ.ರೇವಣ್ಣ ಅವರುಗಳು ಹಾಸನ ತಾಲ್ಲೂಕು ಕಸಬಾ ಹೋಬಳಿ ಬೂವನಹಳ್ಳಿ ಗ್ಯಾರಹಳ್ಳಿ, ದೊಡ್ಡಕೊಂಡಗೊಳ, ಮಾವಿನಹಳ್ಳಿ ಗ್ರಾಮಗಳ ಕೆರೆ ಮತ್ತು ಕಾಲುವೆಗಳನ್ನು ಮುಚ್ಚಿ ಬಡಾವಣೆ ನಿರ್ಮಿಸುತ್ತಿರುವ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

25. ಶ್ರೀಯುತರುಗಳಾದ ಸಾ.ರಾ. ಮಹೇಶ್, ಸಿ.ಎನ್.ಬಾಲಕೃಷ್ಣ, ಹೆಚ್.ಡಿ.ರೇವಣ್ಣ ಹಾಗೂ ಕೆ.ಎಂ.ಶಿವಲಿಂಗೇಗೌಡ ಅವರುಗಳು ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದಲ್ಲಿ ಕೆಂಪೇಗೌಡ ಬಡಾವಣೆಯ ಕಾಮಗಾರಿಗಳಿಗಾಗಿ ಬೋಗಸ್ ದಾಖಲೆಗಳನ್ನು ಸಲ್ಲಿಸಿ ಗುತ್ತಿಗೆ ಪಡೆದಿರುವ ಪ್ರಕರಣದಲ್ಲಿ ಶಾಮೀಲಾಗಿರುವ ಅಧಿಕಾರಿಗಳ ವಿರುದ್ಧ ಕ್ರಮ ಕೈಗೊಳ್ಳುವ ಬಗ್ಗೆ ಮಾನ್ಯ ಮುಖ್ಯಮಂತ್ರಿಗಳ ಗಮನ ಸೆಳೆಯುವುದು.

26. ಶ್ರೀಯುತರುಗಳಾದ ಎನ್.ಚಲುವರಾಯಸ್ವಾಮಿ, ಡಿ.ಸಿ.ತಮ್ಮಣ್ಣ, ಸಾ.ರಾ.ಮಹೇಶ್, ಕೆ.ಎಸ್.ಪುಟ್ಟಣ್ಣಯ್ಯ, ಎ.ಬಿ. ರಮೇಶ್ ಬಂಡೀಸಿದ್ದೇಗೌಡ ಹಾಗೂ ಇತರರು 2014-15ನೇ ಸಾಲಿನಲ್ಲಿ ಮಂಡ್ಯ ಜಿಲ್ಲೆಯ ಕಬ್ಬು ಬೆಳೆಗಾರರಿಗೆ ನೀಡಬೇಕಾಗಿರುವ ಬಾಕಿ ಮೊತ್ತವನ್ನು ಕೂಡಲೇ ನೀಡಲು ಹಾಗೂ ಕಾರ್ಖಾನೆಗಳನ್ನು ಪುನರ್ ಪ್ರಾರಂಭಿಸುವ ಬಗ್ಗೆ ಮಾನ್ಯ ಸಹಕಾರ ಮತ್ತು ಸಕ್ಕರೆ ಸಚಿವರ ಗಮನ ಸೆಳೆಯುವುದು.

ಮು.ತಿ.ನೋ.,

27. ಶ್ರೀಯುತರುಗಳಾದ ಹೆಚ್.ಡಿ.ರೇವಣ್ಣ, ವೈ.ಎಸ್.ವಿ.ದತ್ತಾ, ಕೆ.ಗೋಪಾಲಯ್ಯ, ಕೆ.ಎಂ.ಶಿವಲಿಂಗೇಗೌಡ ಹಾಗೂ ಇತರರು 2015-16ನೇ ಸಾಲಿಗೆ ನಬಾರ್ಡ್ ಸಂಸ್ಥೆಯವರು ಪುನರ್ ಧನ ಸೌಲಭ್ಯವನ್ನು ಶೇಕಡಾ 60ಕ್ಕೆ ಹೆಚ್ಚಿಸುವ ಬಗ್ಗೆ ಮಾನ್ಯ ಮುಖ್ಯಮಂತ್ರಿಯವರ ಗಮನ ಸೆಳೆಯುವುದು.

28. ಶ್ರೀಯುತರುಗಳಾದ ಪ್ರತಾಪಗೌಡ ಪಾಟೀಲ್, ಬಸವರಾಜ ರಾಯರೆಡ್ಡಿ, ಹಂಪನಗೌಡ ಬಾದರ್ಲಿ, ಎಸ್. ಶಿವರಾಜ ಪಾಟೀಲ್ ಮತ್ತು ಜಿ. ಹಂಪಯ್ಯ ಸಾಹುಕಾರ ಬಲ್ಲಟಗಿ ಅವರುಗಳು 10 ವರ್ಷಗಳಿಂದ ಗುತ್ತಿಗೆ ಆಧಾರದ ಮೇಲೆ ಸೇವೆ ಸಲ್ಲಿಸುತ್ತಿರುವ ಆಯುಷ್ ವೈದ್ಯರನ್ನು ಖಾಯಂಗೊಳಿಸುವ ಬಗ್ಗೆ ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರ ಗಮನ ಸೆಳೆಯುವುದು.

29. ಡಾ|| ಎ.ಬಿ. ಮಾಲಕರೆಡ್ಡಿ ಅವರು ಡಾ|| ಅಂಬೇಡ್ಕರ್ ಅಭಿವೃದ್ಧಿ ನಿಗಮ, ದೇವರಾಜ ಅರಸು ಅಭಿವೃದ್ಧಿ ನಿಗಮ ಮತ್ತು ಅಲ್ಪಸಂಖ್ಯಾತ ಅಭಿವೃದ್ಧಿ ನಿಗಮಗಳಿಂದ ನಿಗದಿಪಡಿಸಿದಷ್ಟು ಕೊಳವೆ ಬಾವಿಗಳನ್ನು ಕೊರೆಯದಿರುವುದರಿಂದ ರೈತರಿಗೆ ಉಂಟಾಗುತ್ತಿರುವ ತೊಂದರೆಯ ಬಗ್ಗೆ ಮಾನ್ಯ ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರ ಗಮನ ಸೆಳೆಯುವುದು.

30. ಶ್ರೀ ಟಿ.ರಘುಮೂರ್ತಿ ಅವರು ಭದ್ರಾ ಮೇಲ್ದಂಡೆ ಯೋಜನೆಯ ಭೂಸ್ವಾಧೀನ ಪ್ರಕ್ರಿಯೆಯ ವಿಳಂಬದಿಂದ ಕಾಮಗಾರಿ ಕುಂಠಿತಗೊಂಡಿರುವ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

31. ಶ್ರೀ ಗುರು ಪಾಟೀಲ್ ಶಿರವಾಳ್ ಅವರು ಕಲಬುರ್ಗಿ ವಿಶ್ವವಿದ್ಯಾಲಯವು ಸಮಯಕ್ಕೆ ಸರಿಯಾಗಿ ಪರೀಕ್ಷೆ ನಡೆಸಿ ಫಲಿತಾಂಶ ಪ್ರಕಟಿಸಲು ಸಾಧ್ಯವಾಗದೆ ವಿದ್ಯಾರ್ಥಿಗಳಿಗೆ ತೊಂದರೆಯಾಗುತ್ತಿರುವ ಬಗ್ಗೆ ಮಾನ್ಯ ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರ ಗಮನ ಸೆಳೆಯುವುದು.

32. ಶ್ರೀಯುತರುಗಳಾದ ಉಮೇಶ್ ವಿ.ಕತ್ತಿ, ವಿಶ್ವೇಶ್ವರ ಹೆಗಡೆ ಕಾಗೇರಿ, ವಿಶ್ವನಾಥ್(ಆನಂದ್) ಚಂದ್ರಶೇಖರ್ ಮಾಮನಿ, ದುರ್ಯೋಧನ ಐಹೊಳೆ ಮತ್ತು ಸಿ.ಟಿ.ರವಿ ಅವರುಗಳು ಬೆಳಗಾವಿ ಜಿಲ್ಲೆಯ ಕಾಗವಾಡ ಕ್ಷೇತ್ರ ಶಿಕ್ಷಣಾಧಿಕಾರಿಯವರು ಅಧಿಕಾರ ಹಾಗೂ ಹಣ ದುರುಪಯೋಗ ಮಾಡಿರುವುದು ಸಾಬೀತಾಗಿರುವುದರಿಂದ ನಿಯಮಗಳನ್ವಯ ಕ್ರಮ ಕೈಗೊಳ್ಳುವ ಬಗ್ಗೆ ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರ ಗಮನ ಸೆಳೆಯುವುದು.

33. ಶ್ರೀಮತಿ ಶಕುಂತಲಾ ಟಿ. ಶೆಟ್ಟಿ ಅವರು ಪರಿಸರ ಪ್ರೇಮಿ ಸಾಲುಮರದ ತಿಮ್ಮಕ್ಕರವರನ್ನು ವಿಶೇಷ ವ್ಯಕ್ತಿಯೆಂದು ಪರಿಗಣಿಸಿ ಗೌರವ ವೇತನ ನೀಡುವ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

ಪು.ತಿ.ನೋ.,.

34. ಶ್ರೀಯುತರುಗಳಾದ ಬಸವರಾಜ್ ರಾಯರೆಡ್ಡಿ, ಬಿ.ಆರ್. ಯಾವಗಲ್, ಪ್ರಿಯಾಂಕ್ ಎಂ. ಖರ್ಗೆ, ಗುರು ಪಾಟೀಲ್ ಶಿರವಾಳ ಮತ್ತು ಡಾ|| ಅಜಯ್ ಸಿಂಗ್ ಅವರುಗಳು ಗದಗ-ವಾಡಿ ರೈಲ್ವೆ ಮಾರ್ಗ ನಿರ್ಮಾಣಕ್ಕೆ ಭೂಮಿ ಸ್ವಾಧೀನ ಪ್ರಕ್ರಿಯೆಯನ್ನು ಪ್ರಾರಂಭಿಸದಿರುವ ಬಗ್ಗೆ ಮಾನ್ಯ ಮೂಲಭೂತ ಸೌಲಭ್ಯ ಅಭಿವೃದ್ಧಿ ಹಾಗೂ ವಾರ್ತಾ ಮತ್ತು ಹಜ್ ಸಚಿವರ ಗಮನ ಸೆಳೆಯುವುದು.

35. ಶ್ರೀ ಎಸ್.ಆರ್. ವಿಶ್ವನಾಥ್ ಅವರು ಬೆಂಗಳೂರು ನಗರ ಜಿಲ್ಲೆಯ ಸಬ್ ರಿಜಿಸ್ಟ್ರಾರ್ ಕಛೇರಿಗಳಲ್ಲಿ ಕಂದಾಯ ನಿವೇಶನಗಳನ್ನು ಅಕ್ರಮವಾಗಿ ನೋಂದಣಿ ಮಾಡುತ್ತಿರುವ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

ಎಂ.ಗುರುರಾಜ
ಕಾರ್ಯದರ್ಶಿ

Raj Natgouda

ವಿಧಾನಸಭೆಯ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.
(http://kla.kar.nic.in/assembly/lob/lob.htm)